ಕನ್ನಡ ಪೋಸ್ಟ್

ಇದು ಸುದ್ದಿ ವಿಲಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 170 | Pages. 2 | Date: 13-05-2025, TUESDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 170 - ಪುಟಗಳು : 2 - 13 ಮೇ 2025 ಮಂಗಳವಾರ Ph: 8762954248 ದರ : ₹1

ಜಿಲ್ಲಾದ್ಯಂತ ಗೌತಮ ಬುದ್ಧ ಜಯಂತಿ

ಶಾಂತಿ ಸಂದೇಶ ಸಾರಿದ ಮಹಾನ್ ಮಾನವತಾವಾದಿ ಸ್ಮರಣೆ | ಅರ್ಥಪೂರ್ಣ ಆಚರಣೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರ ಸೇರಿದಂತೆ ಜಿಲ್ಲೆಯ ವಿವಿಧೆಡೆ ಸ್ಥಳೀಯ ಆಡಳಿತ, ಬೌದ್ಧ ಸಂಘಟನೆ ಹಾಗೂ ದಲಿತಪರ ಸಂಘಟನೆಗಳಿಂದ ಸೋಮವಾರ ಮಹಾನ್ ಮಾನವತಾವಾದಿ ಗೌತಮ ಬುದ್ಧ ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಹಾಸನ, ಬೇಲೂರು, ಅರಕಲಗೂಡು, ಅರಸೀಕೆರೆ, ಚನ್ನರಾಯಪಟ್ಟಣ, ಆಲೂರು, ಹೊಳೆನರಸೀಪುರದಲ್ಲಿ ಅದ್ದೂರಿ ಮೆರವಣಿಗೆ, ಪರಿಣತರ ಉಪನ್ಯಾಸ ಹಾಗೂ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಗೌತಮ ಬುದ್ಧ ಅವರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗುವ ಮೂಲಕ ವಿಶ್ವ ಶಾಂತಿ ಬಯಸೋಣ ಎಂದು ಗಣ್ಯರು ಆಶಿಸಿದರು.

ಹಾಸನ ವರದಿ: ಹಾಸನಾಂಬ ಕಲಾಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ಮಾತನಾಡಿದ ನಗರಸಭೆ ಅಧ್ಯಕ್ಷ ಎಂ. ಚಂದ್ರೇಗೌಡ ಅವರು, ಸಜ್ಜನರ ಸಂಗ, ಸದ್ವಿಚಾರ ಹಾಗು ಶಾಂತಿ ಮಾರ್ಗದಿಂದ ನೆಮ್ಮದಿ ಬದುಕು ಕಟ್ಟಿಕೊಳ್ಳಬಹುದೆಂದು ಭಗವಾನ್ ಗೌತಮ ಬುದ್ಧ ಹೇಳಿದ್ದಾರೆ. ಆದರೆ ಯಾರೂ ಅವರ ತತ್ವಾದರ್ಶ ಪಾಲಿಸುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಭಗವಾನ್ ಬುದ್ಧರ ಆದರ್ಶ ಚಿಂತನೆಗಳು ಇಂದಿಗೂ ಪ್ರಸ್ತುತವಾಗಿವೆ. ಸತ್ಯದ ಅನ್ವೇಷನೆಗೆ ಹೊರಟ ಅವರಿಗೆ 12 ವರ್ಷಗಳ ಬಳಿಕ ಜ್ಞಾನೋದಯವಾಯಿತು. ಬುದ್ಧ ಯಾವತ್ತು ದೈವ, ಆತ್ಮದ ಬಗ್ಗೆ ಚರ್ಚೆ ಮಾಡಲಿಲ್ಲ. ಭೂತ ಕಾಲದ ಬಗ್ಗೆ ಏನನ್ನೂ ಹೇಳಲಿಲ್ಲ. ಭವಿಷ್ಯದ ಚಿಂತನೆ ನಡೆಸಲಿಲ್ಲ. ಅವರ ವಿಚಾರ ಇರುವುದು ಕೇವಲ ವರ್ತಮಾನಕ್ಕೆ ಮಾತ್ರ ಎಂದರು.

ಜಗತ್ತಿನಲ್ಲಿ ಎಲ್ಲರೂ ಒಂದಲ್ಲ ಒಂದು ಕಾರಣದಿಂದ ದುಃಖದಲ್ಲಿರುತ್ತಾರೆ. ಆಸೆಯೇ ದುಃಖಕ್ಕೆ ಮೂಲ ಎಂದು ಬುದ್ಧ ಪ್ರತಿಪಾದಿಸಿದ್ದಾರೆ. ದುಃಖ ತ್ಯಜಿಸಿ ಹೊರಬರಲು ಅಷ್ಟ ಮಾರ್ಗಗಳನ್ನು ಅವರು ಹಾಕಿಕೊಂಡಿದ್ದಾರೆ. ಸರಿಯಾದ ಕ್ರಿಯೆ, ಆಲೋಚನೆ, ದೃಷ್ಟಿ, ಸವಿಸ್ತಾರ ಚಿಂತನೆ, ಏಕಾಗ್ರತೆ, ಸರಿಯಾದ ಜೀವನ ಉಪಾಯ ಇವುಗಳನ್ನು ಪಾಲಿಸಲು ಸೂಚಿಸಿದ್ದಾರೆ ಎಂದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಡಾ. ಎಚ್.ಎಲ್. ಮಲ್ಲೇಶ್ ಗೌಡ ಮಾತನಾಡಿ, ಬುದ್ಧ ತನ್ನ ಕಾಲಮಾನದಲ್ಲಿ ಜಗತ್ತು ಎಂತಹ ಸತ್ಯಗಳಿಂದ ದೂರವಾಗಿದೆ ಎಂದು ಮತ್ತೊಮ್ಮೆ ನೆನಪಿಸಿಕೊಟ್ಟಿದ್ದಾರೆ. ಬುದ್ಧನ ಬಳಿಕ 750 ವರ್ಷಗಳ ನಂತರ ಬಂದ ಮಹಾತ್ಮ ಗಾಂಧೀಜಿ ಸಹ ಅದನ್ನೇ ಪ್ರಸ್ತಾಪಿಸಿದ್ದಾರೆ. ಬ್ರಹ್ಮ, ವಿಷ್ಣು, ಮಹೇಶ್ವರಂತೆ ಬುದ್ಧ, ಬಸವ ಹಾಗೂ ಗಾಂಧೀಜಿ ನಮ್ಮ ಪರಂಪರೆಯ ತ್ರಿಮೂರ್ತಿಗಳು. ಈ ಎಲ್ಲರ ತತ್ವಾದರ್ಶಗಳನ್ನು ಅನುಸರಿಸಿ ಬದುಕಿದವರು ಡಾ. ಬಿ.ಆರ್. ಅಂಬೇಡ್ಕರ್ ಎಂದರು.

ಬೆಂಗಳೂರಿನ ಅಕ್ಕ ಐಎಎಸ್ ಅಕಾಡೆಮಿ ಮುಖ್ಯಸ್ಥ ಡಾ. ಶಿವಕುಮಾರ್ ಮಾತನಾಡಿ, ಬುದ್ಧ ಪೂರ್ಣಿಮೆಯನ್ನು ಭಗವಾನ್ ಬುದ್ಧನ ಜನ್ಮ, ಸತ್ಯದ ಜ್ಞಾನ ಮತ್ತು ಮಹಾಪರಿನಿರ್ವಾಣ ಎಂದು ಪರಿಗಣಿಸಲಾಗಿದೆ. ಬುದ್ಧ ಪೂರ್ಣಿಮೆಯು ಬುದ್ಧನ ಜೀವನಕ್ಕೆ ಸಂಬಂಧಿಸಿಲ್ಲ. ಆದರೆ ಈ ಪೂರ್ಣಿಮಾ ದಿನಾಂಕದಂದು, ಕಾಡಿನಲ್ಲಿ ಅಲೆದಾಡುವ ಮತ್ತು ಕಠಿಣ ತಪಸ್ಸು ಮಾಡಿದ ನಂತರ ಬುದ್ಧನು ಬೋಧಗಯಾದಲ್ಲಿನ ಬೋಧಿ ವೃಕ್ಷದ ಕೆಳಗೆ ಸತ್ಯದ ಜ್ಞಾನವನ್ನು ಪಡೆದನು ಎನ್ನುವ ಕಾರಣಕ್ಕಾಗಿ ಆಚರಿಸಲಾಗುತ್ತದೆ. ಗೌತಮ ಬುದ್ಧರು ಸತ್ಯ ಮತ್ತು ಅಹಿಂಸೆಯ ಮಾರ್ಗವನ್ನು ಅನುಸರಿಸಲು ಜನರನ್ನು ಪ್ರೇರೇಪಿಸಿದರು. ಬುದ್ಧ ಪೂರ್ಣಿಮೆಯಂದು ಭಗವಾನ್ ಬುದ್ಧನ ಅನುಯಾಯಿಗಳು ಅವರ ಬೋಧನೆಗಳನ್ನು ಆಲಿಸುತ್ತಾರೆ ಎಂದರು.

ಭಗವಾನ್ ಬುದ್ಧ ಜಯಂತಿ ಅಂಗವಾಗಿ ಹಾಸನಾಂಬ ಕಲಾಕ್ಷೇತ್ರ ಆವರಣದಲ್ಲಿ ಹೊಯ್ಸಳ ಚಿತ್ರಕಲಾ ಪರಿಷತ್‌ನಿಂದ ಹಮ್ಮಿಕೊಂಡಿದ್ದ ಚಿತ್ರಕಲಾ ಪ್ರದರ್ಶನಕ್ಕೆ ಅಪರ ಜಿಲ್ಲಾಧಿಕಾರಿ ಕೆ.ಟಿ. ಶಾಂತಲಾ ಅವರು ಚಾಲನೆ ನೀಡಿದರು.

ಅಪರ ಜಿಲ್ಲಾಧಿಕಾರಿ ಕೆ.ಟಿ. ಶಾಂತಲಾ, ಜಿಲ್ಲಾ ಪಂಚಾಯಿತಿ ಉಪನಿರ್ದೇಶಕ ಚಂದ್ರಶೇಖರ್, ದವ್ಮಾಚಾರಿ, ಭಾರತಿಯ ಬೌದ್ಧ ಮಹಾಸಭಾ ಅಧ್ಯಕ್ಷ ಬಸವರಾಜು, ಬೌದ್ಧ ಮಹಾಸಭಾ ಜಿಲ್ಲಾಧ್ಯಕ್ಷ ಮಲ್ಲಯ್ಯ ಬೌದ್ಧ, ಎನ್.ಬಿ. ವೀರಭದ್ರಯ್ಯ, ಅನಂತಸ್ವಾಮಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಪಿ. ದೂದ್ ಪೀರ್, ಜಿಲ್ಲಾ ಸರ್ಕಾರಿ ನೌಕರರ ಸಂಘದ ಖಜಾಂಚಿ ಕೆ.ಆರ್. ಹೇಮಂತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಹೆಚ್.ಪಿ. ತಾರಾನಾಥ್, ಕಲಾವಿದರಾದ ಶಂಕರಪ್ಪ, ಎ.ಎನ್. ಲತಾ ಸುರೇಶ್, ಅಥಣಿ ಶಿವಕುಮಾರ್, ಕೃಷ್ಣಚಾರಿ, ರಕ್ಷಿತ್ ಸೌಮ್ಯ ಇತರರಿದ್ದರು.

ಗೌತಮ ಬುದ್ಧರ ತತ್ವಾದರ್ಶ ಪಾಲಿಸಿ

ಅರಕಲಗೂಡು : ಗೌತಮ ಬುದ್ಧನ ಆದರ್ಶಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಂಡು ಅದರಂತೆ ನಡೆದುಕೊಂಡಾಗ ಮಾತ್ರ ದೇಶದಲ್ಲಿ ಶಾಂತಿ, ನೆಮ್ಮದಿ ಮತ್ತು ಸಹಬಾಳ್ವೆ ಉಳಿಯಲು ಸಾಧ್ಯವೆಂದು ತಹಸೀಲ್ದಾರ್ ಸೌಮ್ಯ ಹೇಳಿದರು.

ಪಟ್ಟಣದ ಡಿ.ದೇವರಾಜು ಅರಸು ಭವನದ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಆಯೋಜಿಸಿದ್ದ ಬುದ್ಧ ಜಯಂತಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬುದ್ಧ ತನ್ನ ಚಿಕ್ಕ ವಯಸ್ಸಿ ಗೆ ಪ್ರಪಂಚದ್ಯಾಂತ ಪ್ರವಾಸ ಮಾಡಿ ಗುರು ಹಿರಿಯರ ಮಾರ್ಗದರ್ಶನ ಪಡೆದು ನಂತರ ಅರಳಿ ಮರದ ಕೆಳಗೆ ಕುಳಿತು ತಪಸ್ಸು ಮಾಡಿ ಜ್ಞಾನ ದೀಕ್ಷೆ ಪಡೆದರು ಎಂದರು.

ಹಿರಿಯ ವಕೀಲ ಬಿ.ಸಿ ರಾಜೇಶ್ ಮಾತನಾಡಿ, ಈ ದೇಶದ ಅತೀ ಪ್ರಾಚೀನ ಧರ್ಮ ಬೌದ್ಧ ಧರ್ಮವಾಗಿದೆ.ಆದರೆ ಇಲ್ಲಿ ಹೆಚ್ಚು ಬೆಳವಣಿಗೆಯಾಗದೇ ವಿಶ್ವದ 30ಕ್ಕೂ ಹೆಚ್ಚು ದೇಶಗಳಲ್ಲಿ ಮೂಲ ಧರ್ಮವಾಗಿ ಶಾಂತಿ ಸುವ್ಯವಸ್ಥೆಗೆ ನಾಂಧಿಯಾಗಿದೆ.ಈ ಧರ್ಮದ ತತ್ವಗಳನ್ನು ಅಳವಡಿಸಿಕೊಂಡರೇ ಯಾವುದೇ ರೀತಿಯ ತಾರತಮ್ಯವನ್ನು ಕಾಣಲು ಸಾಧ್ಯವಿಲ್ಲ. ಈ ಸಲುವಾಗಿಯೇ ಬಾಬಾ ಸಾಹೇಬರು ಅಂತಿಮ ಹಂತದಲ್ಲಿ ಬೌದ್ಧಧರ್ಮವನ್ನು ಲಕ್ಷಾಂತರ ಜನರೊಂದಿಗೆ ಸ್ವೀಕರಿಸಿದರು. ಇದು ನಮಗೆ ದಾರಿದೀಪವಾಗಿದೆ.ರಾಜ್ಯ ಸರಕಾರ ಈ ಬಾರಿ ಬುದ್ಧಪೂರ್ಣಿಮೆ ಆಚರಣೆಯನ್ನು ಅನುಷ್ಠಾನಕ್ಕೆ ತಂದಿರುವುದು ಬೌದ್ಧಧರ್ಮದ ವಿಕಸನಕ್ಕೆ ಮುನ್ನುಡಿಯಾಗಿದೆ ಎಂದು ಹೇಳಿದರು. ದಸಂಸ ಮುಖಂಡ ದುಮ್ಮಿ ಕೃಷ್ಣ ಮಾತನಾಡಿದರು.

ಕಾರ್ಯಕ್ರಮದಲ್ಲಿ ತಾಪಂ ಇಒ ಪ್ರಕಾಶ್, ತಾಲೂಕು ಆರೋಗ್ಯಾಧಿಕಾರಿ ಡಾ. ಪುಷ್ಪಲತಾ , ಪಪಂ ಸದಸ್ಯ ಕೃಷ್ಣಯ್ಯ, ಮುಖ್ಯಾಧಿಕಾರಿ ಬಸವರಾಜ ಟಾಕಪ್ಪಶಿಗ್ಗಾಂವಿ, ಉಪ ನೊಂದಣಾಧಿಕಾರಿ ಸೋಮಶೇಖರ್, ಗ್ರೇಡ್-2 ತಹಸೀಲ್ದಾರ್ ಸಿ.ಸ್ವಾಮಿ ಇತರರಿದ್ದರು.

ಬೇಲೂರಿನಲ್ಲಿ ಅದ್ದೂರಿ ಮೆರವಣಿಗೆ

ಬೇಲೂರು : ತಾಲ್ಲೂಕು ಆಡಳಿತ, ಗಾಧಾರ ಬುದ್ಧ ವಿಹಾರ ಟ್ರಸ್ಟ್, ಭಾರತೀಯ ಬೌದ್ಧ ಮಹಾಸಭಾ ಹಾಗೂ ದಲಿತ ಮತ್ತು ಪ್ರಗತಿಪರ ಸಂಘಟನೆಗಳಿಂದ ಸೋಮವಾರ ಅರ್ಥಪೂರ್ಣ ಬುದ್ಧ ಜಯಂತಿ ಹಮ್ಮಿಕೊಳ್ಳಲಾಯಿತು.

ತಾಲ್ಲೂಕು ಕಚೇರಿ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಶಾಸಕ ಹೆಚ್.ಕೆ. ಸುರೇಶ್ ಮತ್ತಿತರ ಗಣ್ಯರು ಪುಷ್ಪ ನಮನ ಸಲ್ಲಿಸಿ ಮೆರವಣಿಗೆಗೆ ಚಾಲನೆ ನೀಡಿದರು.

ಡಾ. ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ವೇದಿಕೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಹೆಚ್.ಕೆ. ಸುರೇಶ್ ಅವರು ಮಾತನಾಡಿ, ಗೌತಮ ಬುದ್ಧರ ತತ್ವ ಸಿದ್ಧಾಂತಗಳನ್ನು ಯಾರು ಪಾಲಿಸುತ್ತಾರೋ ಅವರು ಉತ್ತಮ ಬದುಕು ರೂಪಿಸಿಕೊಳ್ಳುತ್ತಾರೆ. ಗೌತಮ ಬುದ್ಧರ ಪಂಚ ಶೀಲಗಳನ್ನು ಪಾಲನೆ ಮಾಡಿದರೆ ಮಾತ್ರ ಜೀವನದಲ್ಲಿ ಶಾಂತಿ ನೆಮ್ಮದಿ ಸಾಧ್ಯ. ಆದರೆ ಇಂದು ಏನಾಗಿದೆ ಎಂದರೆ ಶಾಂತಿ ಸೌಹಾರ್ದತೆಯನ್ನು ಕಾಪಾಡುವಲ್ಲಿ ಎಲ್ಲರೂ ವಿಫಲರಾಗಿದ್ದೇವೆ. ಪ್ರತಿಯೊಬ್ಬರೂ ಬುದ್ಧ, ಬಸವ, ಅಂಬೇಡ್ಕರ್ ಅವರ ದಾರಿಯಲ್ಲಿ ನಡೆದರೆ ವಿಶ್ವದಲ್ಲಿ ಎಲ್ಲರೂ ಶಾಂತಿ, ನೆಮ್ಮದಿಯೊಂದಿಗೆ ಬದುಕಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಡಾ. ಬಿ.ಆರ್. ಅಂಬೇಡ್ಕರ್ ಹೇಳಿದಂತೆ ಇತಿಹಾಸವನ್ನು ಮರೆತವರು ಇತಿಹಾಸ ಸೃಷ್ಟಿಸಲಾರರು. ಬುದ್ಧ, ಬಸವಣ್ಣ, ಅಂಬೇಡ್ಕರ್ ಇತಿಹಾಸವನ್ನು ಮೊದಲು ತಿಳಿಯಬೇಕು. ಸರ್ಕಾರಗಳು ಗೌತಮ ಬುದ್ಧರ ಜಯಂತಿಯನ್ನು ಈ ಮೊದಲೇ ಆಚರಿಸಬೇಕಿತ್ತು. ಆದರೆ ಈಗಲಾದರೂ ಆಚರಣೆಗೆ ಮುಂದಾಗಿರುವುದಕ್ಕೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಬೌದ್ಧ ಗುರು ಜ್ಞಾನ ಸಾಗರ ಬಂತೇಜಿ ಅವರು ಮಾತನಾಡಿ, ಬುದ್ಧರ ಹುಟ್ಟು, ಜ್ಞಾನೋದಯ ಹಾಗು ಪರಿನಿಬ್ಬಾಣ ಹೊಂದಿದ ವಿಶೇಷ ದಿನವೇ ವೈಶಾಕ ಬುದ್ಧ ಪೂರ್ಣಿಮೆ. ಇದರೊಂದಿಗೆ ಭಗವಾನ್ ಬುದ್ಧರ ಶಾಸನವನ್ನು ಭೋದಿಸಿ, ಜಗತ್ತಿನ ಪ್ರತಿಯೊಬ್ಬರಿಗೂ ಶಾತಿ, ಮೈತ್ರಿ, ಪ್ರೀತಿ, ಕರುಣೆಯನ್ನು ಬಯಸಿದರು.

ಗುಣರತ್ನ ಬಂತೇಜಿ, ತಹಶೀಲ್ದಾರ್ ಎಂ. ಮಮತಾ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ವಸಂತ ಕುಮಾರ್, ಗಾಂಧಾರ ಬೌದ್ಧ ವಿಹಾರ ಟ್ರಸ್ಟ್ ಕಾರ್ಯದರ್ಶಿ ರಾಜು, ಭಾರತೀಯ ಬೌದ್ಧ ಮಹಾಸಭಾ ತಾಲ್ಲೂಕು ಗೌರವಾಧ್ಯಕ್ಷ ಬಿ.ಎಲ್. ಲಕ್ಷ್ಮಣ್, ಜಿಲ್ಲಾ ಕೆಡಿಪಿ ಸದಸ್ಯೆ ಸೌಮ್ಯ, ತಾಲ್ಲೂಕು ಕೆಡಿಪಿ ಸದಸ್ಯೆ ಜ್ಯೋತಿ, ಸಾಲುಮರದ ತಿಮ್ಮಕ್ಕ ಫೌಂಡೇಷನ್ ಅಧ್ಯಕ್ಷ ಬಳ್ಳೂರು ಉಮೇಶ್, ನವೀನ್, ಉಪನ್ಯಾಸಕ ತಮ್ಮಣ್ಣಗೌಡ ಮತ್ತಿತರರಿದ್ದರು.

ಮಹಾನ್ ಮಾನವತಾವಾದಿ ಬುದ್ಧ

ಹೊಳೆನರಸೀಪುರ : ವಿಶ್ವಕ್ಕೆ ಶಾಂತಿ ಸಂದೇಶ ಸಾರಿದ ಮಹಾನ್ ಮಾನವತಾವಾದಿ ಗೌತಮ ಬುದ್ಧ ಎಂದು ತಾಲ್ಲೂಕು ಪಂಚಾಯಿತಿ ಯೋಜನಾಧಿಕಾರಿ ಪಿ.ಆರ್. ಗೋಪಾಲ್ ತಿಳಿಸಿದರು.

ತಾಲ್ಲೂಕು ಆಡಳಿತ ವತಿಯಿಂದ ಪಟ್ಟಣದ ಸಾರ್ವಜನಿಕ ಸಮುದಾಯ ಭವನದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಬುದ್ಧ ಜಯಂತಿ ಉದ್ಘಾಟಿಸಿ ಮಾತನಾಡಿದ ಅವರು, ಆಸೆಯೇ ದುಃಖಕ್ಕೆ ಮೂಲ ಎಂಬ ಸಂದೇಶವನ್ನು ವಿಶ್ವದೆಲ್ಲೆಡೆ ಸಾರಿ, ಆ ಮೂಲಕ ಎಲ್ಲರೂ ಶಾಂತಿ, ಸಹನೆ, ತಾಳ್ಮೆ, ನೆಮ್ಮದಿ ಕಂಡುಕೊಳ್ಳಬೇಕು ಎಂದು ಸಾವಿರಾರು ವರ್ಷಗಳ ಹಿಂದೆಯೇ ಬುದ್ಧ ಸಾರಿದ್ದಾರೆ ಎಂದರು.

ಉಪನ್ಯಾಸಕ ಬಿ.ಕೆ. ವೆಂಕಟೇಶ್ ಮಾತನಾಡಿ, ಬುದ್ಧ ಅವರ ಪಂಚಶೀಲ ಸೂತ್ರಗಳನ್ನು ಅಳವಡಿಸಿಕೊಂಡಾಗ ಮಾತ್ರ ಸಮಾಜದಲ್ಲಿ ಶಾಶ್ವತವಾಗಿ ಶಾಂತಿ ನೆಲೆಸುತ್ತದೆ ಎಂದರು.

ಬೌದ್ಧ ಮಹಾಸಭಾದ ವೆಂಕಟೇಶಮೂರ್ತಿ ಮಾತನಾಡಿ, ಬುದ್ಧ ಅವರ ಬಾಲ್ಯದ ಬದುಕನ್ನು ಮೆಲುಕು ಹಾಕಿ ಎಲ್ಲರೂ ಬುದ್ಧ ಮಾರ್ಗದಲ್ಲಿ ನಡೆಯಬೇಕೆಂದು ತಿಳಿಸಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಟಿ. ಲಕ್ಷ್ಮಣ ಅವರು ಮಾತನಾಡಿ, ವಿಶ್ವಕ್ಕೆ ಸಮಾನತೆ ಮತ್ತು ಶಾಂತಿ ಸಂದೇಶ ಸಾರಿದ ಗೌತಮ ಬುದ್ಧರ ಜಯಂತಿಯನ್ನು ಸರ್ಕಾರಿ ಕಾರ್ಯಕ್ರಮವಾಗಿ ಆಚರಿಸಲು ಅವಕಾಶ ಮಾಡಿಕೊಟ್ಟ ರಾಜ್ಯ ಸರ್ಕಾರಕ್ಕೆ ನಾವೆಲ್ಲರೂ ಋಣಿ ಎಂದರು.

ಬುದ್ಧ ಹಾಕಿಕೊಟ್ಟ ಹಾದಿಯಲ್ಲಿ ನಡೆಯಬೇಕೆಂಬ ದೃಢ ಸಂಕಲ್ಪ ಮಾಡಿದ ವಿಶ್ವಜ್ಞಾನಿ ಡಾ.ಬಿ.ಆರ್. ಅಂಬೇಡ್ಕರ್ ಸಾಹೇಬರು ಲಕ್ಷಾಂತರ ಅನುಯಾಯಿಗಳೊಂದಿಗೆ ಬೌದ್ಧ ಧರ್ಮ ಸ್ವೀಕಾರ ಮಾಡಿದರು ಎಂದರು.

ಪುರಸಭಾಧ್ಯಕ್ಷ ಹೆಚ್.ಕೆ. ಪ್ರಸನ್ನ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಶಿರಸ್ತೇದಾರ್ ಲೋಕೇಶ್, ಉದಯ್, ಅವಿನಾಶ್, ಸಹಾಯಕ ಕಾರ್ಯಪಾಲಕ ಅಭಿಯಂತರಾದ ಸೋಮಶೇಖರ್, ರುಕ್ಮಾಂಗದ, ಬೌದ್ಧ ಮಹಾಸಭಾದ ಈರಯ್ಯ, ದೇವರಾಜ್, ಮುಖಂಡರಾದ ಎಲ್.ಡಿ. ಬಸವರಾಜು, ಹೆಚ್. ವೈ. ಚಂದ್ರಶೇಖರ್, ವಕೀಲರಾದ ಹರೀಶ್, ಮಂಜುನಾಥ, ಪುಟ್ಟರಾಜ ಹಾಗೂ ಇತರರಿದ್ದರು.

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಪಟ್ಟಣದ ಡಾ.ಬಿ.ಆರ್ ಅಂಬೇಡ್ಕರ್ ನಗರದ ಅರಳೀಕಟ್ಟೆ ವೃತ್ತದಲ್ಲಿ ಬುದ್ಧ ಅವರ ಪ್ರತಿಮೆಗೆ ಹೂ ಅರ್ಪಣೆ ಮಾಡಿ ಮೆರವಣಿಗೆ ನಡೆಸಲಾಯಿತು. ಡಾ. ಬಿ.ಆರ್. ಅಂಬೇಡ್ಕರ್, ಮಹಾತ್ಮ ಗಾಂಧೀಜಿ ಪುತ್ಥಳಿ ಹಾಗು ಕನಕದಾಸರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಲಾಯಿತು.

ಮೆರವಣಿಗೆಯಲ್ಲಿ ಪುರಸಭಾ ಮುಖ್ಯಾಧಿಕಾರಿ ಶಿವಶಂಕರ್ ಹಾಗು ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

ಮನುಷ್ಯನ ದೇಹಕ್ಕೆ ಚೈತನ್ಯ ಸ್ವರೂಪವಿದೆ

ತೆಂಕಲಗೂಡು ಮಠದಲ್ಲಿ ಆರೋಗ್ಯ ಶಿಬಿರ | ಚನ್ನಸಿದ್ದೇಶ್ವರ ಶ್ರೀ ಅಭಿಮತ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಮನುಷ್ಯನ ದೇಹದಲ್ಲಿ ಪರಮಾತ್ಮನ ಚೈತನ್ಯ ಸ್ವರೂಪವಿದೆ. ಆದ್ದರಿಂದ ಅದನ್ನು ಚೆನ್ನಾಗಿಟ್ಟುಕೊಳ್ಳಬೇಕು ಎಂದು ತೆಂಕಲಗೂಡು ಮಠದ ಶ್ರೀ ಚನ್ನಸಿದ್ದೇಶ್ವರ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಯಸಳೂರು ಗ್ರಾಮದ ತೆಂಕಲಗೂಡು ಬೃಹನ್ಮಠದಲ್ಲಿ ಸೋಮವಾರ ಪಂಚಮಹೋತ್ಸವ-ಧಾರ್ಮಿಕ ಸಮ್ಮೇಳನ ಅಂಗವಾಗಿ ಹಾಸನದ ಇಂಡಿಯಾನಾ ಆಸ್ಪತ್ರೆ ವತಿಯಿಂದ ಏರ್ಪಡಿಸಿದ್ದ ಆರೋಗ್ಯ ಉಚಿತ ಶಿಬಿರದಲ್ಲಿ ಆಶೀರ್ವಚನ ನೀಡಿದರು.

ಮನುಷ್ಯ ಜೀವಂತವಿರುವಾಗ ಮಾತ್ರ ಬೆಲೆ. ಸತ್ತಾಗ ಬೆಲೆ ಇರುವುದಿಲ್ಲ. ಹಾಗಾಗಿ ಸಾವು ಬದುಕಿನ ನಡುವೆ ಸಮಾಜಕ್ಕೆ ಏನಾದರೂ ಕೊಡುಗೆ ನೀಡಬೇಕು. ಪ್ರಸ್ತುತ ಪರಿಸ್ಥಿತಿಯಲ್ಲಿ ಜನರು ಒತ್ತಡದಿಂದ ಬದುಕುವಂತಾಗಿದೆ. ಇದರಿಂದ ಮುಕ್ತಿ ಹೊಂದಲು ದೈಹಿಕ, ಮಾನಸಿಕವಾಗಿ ನಾವು ಜೀವನ ಶೈಲಿಯನ್ನು ಬದಲಾಯಿಸಿಕೊಳ್ಳಬೇಕು. ಸಾರ್ವಜನಿಕರಿಗೆ ಆರೋಗ್ಯದ ಅರಿವು ಮೂಡಿಸಲು ಈ ಶಿಬಿರ ಆಯೋಜಿಸಲಾಗಿದೆ ಎಂದು ತಿಳಿಸಿದರು. ಕೊಡ್ಲಿಪೇಟೆ ಆರೋಗ್ಯ ಅಧಿಕಾರಿ ಡಾ. ಉದಯ್ ಮಾತನಾಡಿ, ಮಠದ ಹಿಂದಿನ ಸ್ವಾಮೀಜಿ 42 ವರ್ಷಗಳಿಂದ ಪ್ರಯತ್ನಿಸಿ ಸುಸ್ಥಿತಿಗೆ ತರುವಲ್ಲಿ ಬಹಳ ಪ್ರಯತ್ನ ಹಾಗೂ ಕಾಳಜಿ ವಹಿಸಿದ್ದಾರೆ. ಜೊತೆಗೆ ಅವರಿಗೆ ಸಾಮಾಜಿಕ ಕಳಕಳಿ ಇತ್ತು. ಆ ಸಮಯದಲ್ಲೇ ಅವರು ಮುಂದಿನ ಸ್ವಾಮಿಗಳಿಗೆ ಸಾಕಷ್ಟು ಉಪದೇಶಗಳನ್ನು ಕೊಟ್ಟಿದ್ದರು.ಅದರಂತೆ ಇಂದಿನ ಸ್ವಾಮೀಜಿ ಹಾಕಿಕೊಟ್ಟ ಹಾದಿಯಲ್ಲಿ ನೆಡೆಸಿಕೊಂಡು ಹೋಗುತ್ತೀದ್ದಾರೆ. ಈ ತರಹದ ಸಮಾಜಮುಖಿ ಕಾರ್ಯಕ್ರಮವನ್ನು ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು. ಇಂಡಿಯಾನಾ ಆಸ್ಪತ್ರೆ ಹೃದ್ರೋಗ ತಜ್ಞ ಡಾ. ಎಂ. ಅನೂಪ್ ಮಾತನಾಡಿ, 18 ವರ್ಷದಿಂದ ನಮ್ಮ ಜೀವನ ಶೈಲಿಯನ್ನು ಬದಲಾಯಿಸಿಕೊಳ್ಳುತ್ತಾ ಹೋಗಬೇಕು. ಸಮಯಕ್ಕೆ ತಕ್

ಸತ್ಕಾರ್ಯಗಳಿಂದ ಅಂತರಂಗ ಶುದ್ಧಿ: ಬಾಳೆಹೊನ್ನೂರು ಶ್ರೀ

ಮಸವತ್ತೂರು ಗ್ರಾಮದಲ್ಲಿ ದೇಗುಲ ಪುನರ್ ಪ್ರತಿಷ್ಠಾಪನೆ : ಪಲ್ಲಕ್ಕಿ ಉತ್ಸವ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ಸತ್ಕಾರ್ಯಗಳಿಂದ ಮನುಷ್ಯನ ಅಂತರಂಗ ಪರಿಶುದ್ಧವಾಗುತ್ತದೆ. ಸತ್ಯ ಶುದ್ಧ ಕಾಯಕದಿಂದ ಬದುಕು ಉಜ್ವಲಗೊಳ್ಳುತ್ತದೆ. ಮೌಲ್ಯಾಧಾರಿತ ಸದ್ಗುಣವಂತನ ಬದುಕು ಇನ್ನಿತರರಿಗೆ ದಾರಿ ದೀಪವಾಗುತ್ತದೆ. ಸದ್ಗುಣ ಮತ್ತು ಸಚ್ಚಾರಿತ್ರ್ಯದಿಂದ ಮನುಷ್ಯನ ಬದುಕು ಶ್ರೀಮಂತಗೊಳ್ಳಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರು ಅಭಿಪ್ರಾಯಪಟ್ಟರು.

ತಾಲ್ಲೂಕಿನ ಮುಸವತ್ತೂರು ಗ್ರಾಮದ ನೂತನ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಪುನರ್ ಪ್ರತಿಷ್ಠಾಪನೆ ಹಾಗೂ ಶ್ರೀ ಶಂಕರಲಿಂಗೇಶ್ವರ ಜಂಪೋತ್ಸವದ ಅಂಗವಾಗಿ ಜರುಗಿದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಈಶ ನಿರ್ಮಿತವಾದ ಈ ಪ್ರಪಂಚದಲ್ಲಿ ಇರುವುದೆಲ್ಲವೂ ಅಮೂಲ್ಯ ಸಂಪತ್ತು. ಮಣ್ಣು ನೀರು ಬೆಂಕಿ ಗಾಳಿ ಮತ್ತು ಕಲ್ಲಿನಲ್ಲಿಯೂ ದೇವರನ್ನು ಕಂಡು ಪೂಜಿಸಿದವರು ಭಾರತೀಯರು. ಚಿನ್ನವಿಲ್ಲದೇ ಮನುಷ್ಯ ಬದುಕಬಹುದು. ಆದರೆ ಅನ್ನವಿಲ್ಲದೇ ಬದುಕಲು ಸಾಧ್ಯವಿಲ್ಲ. ದೇಹ ಮನ ಬುದ್ಧಿ ಕೈಕಾಲು ಇವುಗಳೆಲ್ಲವೂ ನಿಜವಾದ ಸಂಪತ್ತು. ಹಣ ಚಿನ್ನ ಬೆಳ್ಳಿ ವಸ್ತು ವಡವೆಗಳಿಂಗ ಬದುಕು ಕಟ್ಟಿಕೊಳ್ಳುವುದು ಒಳಿತಲ್ಲ. ಮೌಲ್ಯಾಧಾರಿತ ಧರ್ಮದ ಪರಿಪಾಲನೆಯನ್ನು ಮಾಡಿ ಮುನ್ನಡೆದರೆ ಬದುಕು ಆದರ್ಶಗೊಳ್ಳುತ್ತದೆ. ಮನಸಿನ ಹೊಯ್ದಾಟವನ್ನು ಶಾಂತ ಪ್ರಶಾಂತಗೊಳಿಸುವ ಮಾರ್ಗವೇ ಆಧ್ಯಾತ್ಮವೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಗ್ರಂಥದಲ್ಲಿ ಸ್ಪಷ್ಟಪಡಿಸಿದ್ದಾರೆ ಎಂದರು.

ಆಚಾರ್ಯರು ಋಷಿಮುನಿಗಳು ಸಂತ ಮಹಾಂತರು ಭೌತಿಕ ಬದುಕಿಗೆ ಸೋಲದೇ ಆಧ್ಯಾತ್ಮ ಮಾರ್ಗದಲ್ಲಿ ಆನಂದದಿಂದ ಬಾಳಿ ಇನ್ನಿತರರ ಬಾಳಿಗೆ ದಾರಿದೀಪವಾದರು. ಮುಸವತ್ತೂರು ಗ್ರಾಮದ ಸಕಲ ಸದ್ಭಕ್ತರ ಸಹಕಾರದಿಂದ ನೂತನ ಶ್ರೀ ವೀರಭದ್ರೇಶ್ವರ ದೇವಸ್ಥಾನ ನಿರ್ಮಿಸಿ ಮೂರ್ತಿ ಪ್ರತಿಷ್ಠಾಪನೆ ಮಾಡಿಸಿರುವುದು ತಮ್ಮ ಮಲ್ಲರಲ್ಲಿರುವ ಧರ್ಮಶ್ರದ್ಧೆ ದೇವರಲ್ಲಿಟ್ಟ ನಂಬಿಕೆ ಕಂಡು ಅತ್ಯಂತ ಹರುಷ ತಮಗೆ ಉಂಟಾಗಿದೆ ಎಂದು ಹೇಳಿದರು.

ಸಮ್ಮುಖ ವಹಿಸಿದ ಕಾರ್ಜುವಳ್ಳಿ ಹಿರೇಮಠದ ಸದಾಶಿವ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಮಾನವ ಜೀವನ ಅಮೂಲ್ಯ. ದೇವರು ಕೊಟ್ಟ ಕೊಡುಗೆಗೆ ಸರಿಸಾಟಿಯಾದುದು ಇನ್ನೊಂದಿಲ್ಲ. ಅರಿತು ಬಾಳಿದರೆ ಬಾಳು ಬಂಗಾರ. ಮರೆತು ಬಾಳಿದರೆ ಬಾಳು ಬಂಧನಕಾರಿಯಾಗುತ್ತದೆ ಎಂದರು.

ಹೆಗ್ಗಡಹಳ್ಳಿಮಠದ ಷಡಾಕ್ಷರಿ ತೇಶ್ವರ ಶ್ರೀಗಳು, ಕೆಸವತ್ತೂರು ಬಸವರಾಜೇಂದ್ರ ಸ್ವಾಮಿಗಳು, ಶಿರದನಹಳ್ಳಿ ಸದಾಶಿವ ಸ್ವಾಮಿಗಳು ಉಪಸ್ಥಿತರಿದ್ದರು. ಕುಮಾರಿ ಹಾರಿಕಾ ಮಂಜುನಾಥ ಭಾರತೀಯ ಸಂಸ್ಕೃತಿ ಕುರಿತು ವಿಶೇಷ ಉಪನ್ಯಾಸ ನೀಡಿದರು. ಸಮಾರಂಭವನ್ನು ಹಾಸನ ಜಿಲ್ಲಾ ಬಿ.ಜೆ.ಪಿ.ಅಧ್ಯಕ್ಷ ಸಿದ್ದೇಶ ನಾಗೇಂದ್ರ ಉದ್ಘಾಟಿಸಿದರು.

ತಾಲೂಕು ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ದೊಡ್ಡಬೆಮ್ಮತ್ತಿ ಸುರೇಶ ಅವರು ನೇತೃತ್ವ ವಹಿಸಿದ್ದರು.

ಹಿಂದುಗಳು ಒಗ್ಗಟ್ಟಾಗಿರಲು ಕೆ.ಎಸ್. ಲಿಂಗೇಶ್ ಸಲಹೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಗುಂಡಿನ ದಾಳಿ ನಡೆಸಿದ ಉಗ್ರರು ಕನ್ನಡಿಗ, ತಮಿಳಿಗ, ಒಕ್ಕಲಿಗ, ಲಿಂಗಾಯತ ಎಂದು ಕೇಳಿಲ್ಲ ಅವರು ಹಿಂದು ಧರ್ಮವನ್ನೇ ಟಾರ್ಗೆಟ್ ಮಾಡಿದ್ದರು. ಹೀಗಾಗಿ ಹಿಂದುಗಳು ಒಗ್ಗಟ್ಟಾಗಿರಬೇಕು ಎಂದು ಮಾಜಿ ಶಾಸಕ ಕೆ.ಎಸ್. ಲಿಂಗೇಶ್ ಹೇಳಿದರು.

ತಾಲ್ಲೂಕಿನ ಯಸಳೂರು ಗ್ರಾಮದ ತೆಂಕಲಗೂಡು ಬೃಹನ್ಮಠದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಪಂಚ ಮಹೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಹಿಂದು ಧರ್ಮ ಎಲ್ಲಾ ಜಾತಿಗಳನ್ನು ಒಳಗೊಂಡಿದೆ. ಒಟ್ಟಾಗಿರುವವರನ್ನು ಒಡೆದು ಆಳುತ್ತಿದ್ದಾರೆ. ಕಾಶ್ಮೀರದ ಪಹಲ್ಗಾಮ್ ನಲ್ಲಿ ಏನೇನು ನಡೆಯಿತು ಎಂಬುದು ಎಲ್ಲರಿಗೂ ನೆನಪಿದೆ. ಹಿಂದುಗಳನ್ನು ಗುರಿಯಾಗಿಸಿ ಗುಂಡಿನ ದಾಳಿ

ನಡೆಸಿದ್ದಾರೆ. ಪ್ಯಾಂಟ್, ನಿಕ್ಕರ್ ಬಿಚ್ಚಿಸಿ ಧರ್ಮ ಪರಿಶೀಲಿಸಿದ್ದಾರೆ. ಉಗ್ರರು ಪ್ರವಾಸಿಗರನ್ನು ಕನ್ನಡಿಗ, ತಮಿಳು, ಲಿಂಗಾಯತ ಅಥವಾ ಒಕ್ಕಲಿಗೆ ಎಂದು ಕೇಳಿಲ್ಲ ಎಂದರು.

ನಾವು ಭಾರತೀಯರು ಎನ್ನುವುದನ್ನು ಮರೆಯಬಾರದು. ಮಹಮದ್ ಘಜ್ನಿ ಹೆಂಗಸರ ಮೇಲೆ ಪೈಶಾಚಿಕ ಕೃತ್ಯ ಎಸಗಿದ್ದ ಎಂಬುದನ್ನು ಮರೆಯಬಾರದು. ಎಲ್ಲಿಯವರೆಗೂ ಹಿಂದು ಧರ್ಮದವರು ಇರುತ್ತೇವೋ ಅಲ್ಲಿಯವರೆಗೂ ಸಂವಿಧಾನ ಪಾಲಿಸುತ್ತೇವೆ ಎಂದು ಹೇಳಿದರು.

ಪಾಕಿಸ್ತಾನ, ಬಾಂಗ್ಲಾದೇಶ, ಆಫ್ಘಾನಿಸ್ತಾನದಲ್ಲಿ ಹಿಂದುಗಳ ಗತಿ ಏನಾಗಿದೆ. ಎಷ್ಟು ಹಿಂದುಗಳು ಅಲ್ಲಿ ವಾಸಿಸುತ್ತಿದ್ದಾರೆ. ಅಂತಹ ಪರಿಸ್ಥಿತಿ ಈ ದೇಶಕ್ಕೆ ಬರುವುದು ಬೇಡ. ಹಿಂದುಗಳಿಗೆ ಭಾರತ ಬಿಟ್ಟರೆ ಬೇರೆ ಯಾವ ದೇಶವಿದೆ ಎಂದು ಪ್ರಶ್ನಿಸಿದರು. ಕ್ರಿಶ್ಚಿಯನ್ ಸಮುದಾಯದವರು ನೂರು ದೇಶಗಳಲ್ಲಿದ್ದಾರೆ. ಮುಸಲ್ಮಾನರು ಅರವತ್ತಕ್ಕೂ ಹೆಚ್ಚು ದೇಶಗಳಲ್ಲಿ ಆಳ್ವಿಕೆ ಮಾಡುತ್ತಿದ್ದಾರೆ. ಹಿಂದುಗಳು ಕೆಲವೇ ದೇಶಗಳಲ್ಲಿದ್ದಾರೆ. ನಮ್ಮ ಒಗ್ಗಟ್ಟು ಮುರಿಯುವ ಯತ್ನ ನಡೆಯುತ್ತಿದ್ದು ಅದಕ್ಕೆ ಆಸ್ಪದ ನೀಡಬಾರದು ಎಂದು ಎಚ್ಚರಿಕೆ ನೀಡಿದರು. ರಾಜಕಾರಣಿಗಳು ವೀರಶೈವ, ಲಿಂಗಾಯತ ಎಂಬ ಹೆಸರಿನಲ್ಲಿ ಸಮಾಜ ಒಡೆಯುವ ಕೆಲಸಕ್ಕೆ ಕೈಹಾಕಿದ್ದಾರೆ. ಲಿಂಗಾಯತ ಬೇರೆ, ವೀರಶೈವ ಬೇರೆ, ಒಳಪಂಗಡಗಳು ಎಂದು ಹೇಳಿ ವಿಭಜನೆ ಮಾಡುವ ಪ್ರಯತ್ನ ನಡೆದಿದೆ ಎಂದು ಕಾಂಗ್ರೆಸ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಬಾಗೂರು ಗ್ರಾಮ ದೇವತೆ ರಥಕ್ಕೆ 1.50 ಕೋಟಿ ರೂ.

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ತಾಲ್ಲೂಕಿನ ಬಾಗೂರು ಗ್ರಾಮದ ಶಕ್ತಿದೇವತೆ ಶ್ರೀ ಸಂತೆ ಕಾಳೇಶ್ವರಿ ಹಾಗೂ ಶ್ರೀ ಚಿಕ್ಕಮ್ಮ ದೇವಿ ನೂತನ ರಥವನ್ನು 1.50 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಆರ್ಥಿಕ ನೆರವು ನೀಡಲಾಗುವುದು ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಬಾಗೂರು ಗ್ರಾಮ ದೇವತೆ ಶ್ರೀ ಸಂತೆ ಕಾಳೇಶ್ವರಿ, ಶ್ರೀ ಚಿಕ್ಕಮ್ಮ ದೇವಿ ದೇವಾಲಯದಲ್ಲಿ ಭಾನುವಾರ ನಡೆದ 48ನೇ ದಿನದ ಮಂಡಲ ಪೂಜಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶ್ರೀ ಸಂತೆ ಕಾಳೇಶ್ವರಿ, ಶ್ರೀ ಚಿಕ್ಕಮ್ಮ ದೇವಿ ನೂತನ ದೇವಾಲಯ ನಿರ್ಮಾಣಕ್ಕೆ ಈಗಾಗಲೇ ಹೇಮಾವತಿ ನೀರಾವರಿ ಇಲಾಖೆ, ವಿವಿಧ ಅನುದಾನ ಸೇರಿ 90 ಲಕ್ಷ ರೂ. ಹಣವನ್ನು ಕಲ್ಪಿಸಲಾಗಿದೆ ಎಂದು ಹೇಳಿದರು.

ಗ್ರಾಮಸ್ಥರ ಒತ್ತಾಯದಂತೆ ದೇವಾಲಯದ ಮುಂಭಾಗ ಕಾಂಕ್ರೀಟ್ ರಸ್ತೆ ನಿರ್ಮಾಣಕ್ಕೆ ಸದ್ಯದಲ್ಲೇ ಅನುದಾನ ಒದಗಿಸಲಾಗುವುದು. ಬಾಗೂರು ಗ್ರಾಮ ಸೇರಿ ವಿವಿಧ ಗ್ರಾಮಗಳಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿ 48ನೇ ದಿನದ ಮಂಡಲ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದಾರೆ ಎಂದು ಹೇಳಿದರು.

ಎಪಿಎಂಸಿ ಅಧ್ಯಕ್ಷ ಬಾಗೂರು ಶಿವಣ್ಣ ಮಾತನಾಡಿ, ದೇವಾಲಯ ನಿರ್ಮಾಣಕ್ಕೆ ಶಾಸಕ ಸಿ.ಎನ್. ಬಾಲಕೃಷ್ಣ ಹೆಚ್ಚಿನ ಸಹಕಾರ ನೀಡಿದ್ದಾರೆ. ನೂತನ ರಥ ನಿರ್ಮಾಣಕ್ಕೆ 1.50 ಕೋಟಿ ರೂ. ಒದಗಿಸಿದ್ದಾರೆ. ಪಕ್ಷಾತೀತವಾಗಿ ಎಲ್ಲಾ ಮುಖಂಡರು ಧಾರ್ಮಿಕ ಕಾರ್ಯಕ್ಕೆ ಸಹಕಾರ ನೀಡಬೇಕು. ಜೊತೆಗೆ ದಾನಿಗಳು ಮತ್ತು ಭಕ್ತರು ನೂತನ ರಥ ನಿರ್ಮಾಣಕ್ಕೆ ಹೆಚ್ಚಿನ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

48ನೇ ದಿನದ ಪೂಜಾ ಕಾರ್ಯಕ್ರಮದಲ್ಲಿ 10 ಸಾವಿರಕ್ಕೂ ಹೆಚ್ಚು ಭಕ್ತರು ಪಾಲ್ಗೊಳ್ಳುವ ನಿರೀಕ್ಷೆ ಹಿನ್ನಲೆಯಲ್ಲಿ ಅನ್ನ ದಾಸೋಹ ಏರ್ಪಡಿಸಲಾಗಿದೆ ಎಂದರು.

ಬಲಿಕಲ್ಲು ಪ್ರತಿಷ್ಠಾಪನೆ

ದೇವಾಲಯದ ಮುಂಭಾಗ ಬಲಿಕಲ್ಲು ಪ್ರತಿಷ್ಠಾಪನೆಗೆ ಶಾಸಕ ಸಿ.ಎನ್. ಬಾಲಕೃಷ್ಣ ಪೂಜೆ ನೆರವೇರಿಸಿದರು. ಬೆಳಿಗ್ಗೆಯಿಂದಲೇ ಅಮ್ಮನವರಿಗೆ ಅಭಿಷೇಕ, ವಿಶೇಷ ಪೂಜೆ, ನೈವೇದ್ಯ, ಹೂವಿನ ಅಲಂಕಾರ ಸೇರಿ ಹೋಮ ಹವನಗಳು ನೆರವೇರಿದವು. ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ವಿಶೇಷ ಪೂಜೆ ಸಲ್ಲಿಸಿದರು.

ಟಿಎಪಿಎಂಎಸ್ ನಿರ್ದೇಶಕ ಮನು, ಕರಿಗಲ್ಲು ಶೇಖರಣ್ಣ, ತಿಮ್ಮೇಗೌಡ, ಪಾಪಣ್ಣ, ತಾಲ್ಲೂಕು ಪಂಚಾಯಿತಿ ಮಾಜಿ ಉಪಾಧ್ಯಕ್ಷ ಮಲ್ಲೇಶ್, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಕಾಂತರಾಜ್, ಬಿ.ಪಿ. ಲಕ್ಷ್ಮಣ್, ಕೃಷಿ ಪತ್ತಿನ ಸಹಕಾರ ಸಂಘ ನಿರ್ದೇಶಕ ಬಿ.ಎನ್. ಹರೀಶ್, ಬಿ.ಜೆ. ರಂಗಸ್ವಾಮಿ, ಗ್ರಾಮ ಪಂಚಾಯಿತಿ ಸದಸ್ಯ ಬಿ.ಟಿ. ರಂಗಸ್ವಾಮಿ ಹಾಗೂ ಇತರರಿದ್ದರು.

ಕೆಂಚಾಂಬ ದೇವಿ ಜಾತ್ರೆಗೆ ಅದ್ಧೂರಿ ತೆರೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ಕೆ. ಹೊಸಕೋಟೆ ಹೋಬಳಿ 48 ಹಳ್ಳಿಗಳಿಗೆ ಸೇರಿದ ಕೆಂಚಾಂಬ ದೇವಿ ವರ್ಷದ ದೊಡ್ಡ ಜಾತ್ರೆ ಕಟ್ಟುನಿಟ್ಟಿನಿಂದ ಅತ್ಯಂತ ವೈಭವ, ಭಯ, ಭಕ್ತಿಯಿಂದ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ನೆರವೇರಿತು.

ಈ ಜಾತ್ರೆಯಲ್ಲಿ ಮಾತ್ರ ದೇವಿ ಪಾದ ಮುಟ್ಟಿ ನಮಸ್ಕರಿಸಲು ಅವಕಾವಿರುತ್ತದೆ. ನೆರೆದಿದ್ದ ಭಕ್ತರೆಲ್ಲಾ ದೇವಿ ಪಾದ ಮುಟ್ಟಿ ನಮಸ್ಕರಿಸಿ ಪುನೀತರಾದರು. ಮೇ 4 ರಿಂದ ಪ್ರಾರಂಭವಾದ ಜಾತ್ರೆಗೆ ಭಾನುವಾರ ದೊಡ್ಡ ಜಾತ್ರೆ ನಡೆಯುವುದರೊಂದಿಗೆ ಅಂತ್ಯ ಹಾಡಲಾಯಿತು.

48 ಹಳ್ಳಿಗೆ ಒಳಪಡುವ ಈ ಜಾತ್ರೆ ವಿಶೇಷವೆಂದರೆ ಪ್ರತಿ ಹಳ್ಳಿಗಳಲ್ಲಿ ಕೆಂಚಮ್ಮ ದೇವಿ ಮುಖ ಧರಿಸಿ ಕೂರಿಸಿ, ಪ್ರತಿದಿನ ಸಂಜೆ ದೇವರ ಉತ್ಸವ ಮತ್ತು ಸುಗ್ಗಿ ಕುಣಿತದಿಂದ ಸಂಭ್ರಮಿಸಿದರು.

ಶನಿವಾರ ರಾತ್ರಿ ಹರಿಹಳ್ಳಿ ಗ್ರಾಮದ ಮೂಲ ದೇವಸ್ಥಾನದಲ್ಲಿ ಸಪ್ತಮಾತೃಕೆಯರ ಮುಖವಾಡವನ್ನಿಟ್ಟು ರಾತ್ರಿ 10 ಗಂಟೆ ವರೆಗೆ ಅಲಂಕಾರ ಮಾಡಿ ಸುಗ್ಗಿ ಕುಣಿತ ಕುಣಿದರು. ಬೆಳಗಿನ

ಜಾವ ಪ್ರತಿ ಹಳ್ಳಿಗಳಲ್ಲಿ ಮಹಿಳೆಯರು ಕಳಸ ತೆಗೆದುಕೊಂಡು ಹೊಳೆ ಬಳಿ ತೆರಳಿ ಕೆಂಚಾಂಬಿಕೆ ದೇವಿಗೆ ಪೂಜೆ ಸಲಿಸಿದರು. ನಂತರ ಮೆರೆ ದೇವರನ್ನು ಕೆಂಚಾಂಬಿಕೆ ದೇವಸ್ಥಾನದವರೆಗೆ ವಾದ್ಯಗೋಷ್ಟಿಯೊಂದಿಗೆ ಮೆರವಣಿಗೆಯಲ್ಲಿ ಬಂದು ದೇವಸ್ಥಾನದಲ್ಲಿ ಕುಳ್ಳಿರಿಸಿದರು.

ಮಧ್ಯಾಹ್ನ ಒಂದು ಗಂಟೆಗೆ ಸರಿಯಾಗಿ ಮಹಾಮಂಗಳಾರತಿ ನೆರವೇರಿತು. ನಂತರ ಅನ್ನ ಬಲಿ ಸಮರ್ಪಿಸಿದರು. ನಂತರ ಭಕ್ತರಿಗೆ ದೇವಿ ಪಾದ ಮುಟ್ಟಿ ನಮಸ್ಕರಿಸಲ ಅವಕಾಶ ಕಲ್ಪಿಸಲಾಯಿತು. ರಾತ್ರಿ 10 ರವರೆಗೆ ಭಕ್ತರು ದೇವಿ ಪಾದ ಮುಟ್ಟಿ ನಮಸ್ಕರಿಸಿದರು.

ಪ್ರತಿ ವರ್ಷಕ್ಕಿಂತ ಈ ವರ್ಷ ಭಕ್ತರ ಸಂಖ್ಯೆ ಅತ್ಯಧಿಕವಾಗಿತ್ತು.

ಜಾತ್ರೆಯಲ್ಲಿ ಮಣ್ಣಿನ ಮಡಿಕೆ ವ್ಯಾಪಾರ ಬಲು ಜೋರು. ಜಾತ್ರೆಗೆ ಬಂದ ಪ್ರತಿಯೊಬ್ಬರೂ ಮಡಿಕೆ ಕೊಂಡು ಹೋಗುವುದು ವಾಡಿಕೆಯಾಗಿದೆ.

ಜಾತ್ರೆ ಪ್ರಾರಂಭವಾಗುವ ಒಂದು ವಾರ ಮೊದಲು 48 ಹಳ್ಳಿಗಳಲ್ಲೂ ಸುಗ್ಗಿ ಸಾರು ಹಾಕುತ್ತಾರೆ. ಸಾರು ಹಾಕಿದ ನಂತರ 48 ಹಳ್ಳಿಗಳ ವ್ಯಾಪ್ತಿಯಲ್ಲಿ ಹಸಿ ಕೊನೆ ಕಡಿಯುವಂತಿಲ್ಲ, ಮುರಿಯುವಂತಿಲ್ಲ, ಒಗ್ಗರಣೆ ಹಾಕುವಂತಿಲ್ಲ. ರೊಟ್ಟಿ ಮಾಡುವುದು, ಹೊಲಸು ಮಾಡುವುದು ನಿಶೇಧವಲ್ಲದೆ, ಗ್ರಾಮದಿಂದ ಹೊರಗಿದ್ದವರು ಹೊರಗೆ, ಊರೊಳಗಿದ್ದವರು ಹೊರಗೆ ಹೋಗುವಂತಿಲ್ಲ. ದೇವಿ ನಿಯಮ ಪಾಲಿಸದಿದ್ದರೆ ತಪ್ಪಿಗೆ ತಕ್ಕ ಶಿಕ್ಷೆ ನೀಡುವಳು ಎಂದು ಪುರಾತನ ಕಾಲದಿಂದ ನಡೆದು ಬಂದಿದೆ. ಸೋಮವಾರದಿಂದ ಪ್ರತಿ ಹಳ್ಳಿಗಳಲ್ಲಿ ಎಂದಿನ ಜೀವನ ಪ್ರಾರಂಭಿಸಿದರು.

ಸಂಸದ ಶ್ರೇಯಸ್ ಎಂ. ಪಟೇಲ್, ಶಾಸಕ ಸಿಮೆಂಟ್ ಮಂಜು, ವಿದಾನಪರಿಷತ್ ಸದಸ್ಯ ಸೂರಜ್ ರೇವಣ್ಣ, ತಹಸೀಲ್ದಾರ್ ಮಲ್ಲಿಕಾರ್ಜುನ, ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು ರವರು ದೇವಿ ದರ್ಶನ ಪಡೆದರು. ಪಿಐ ಮೋಹನರೆಡ್ಡಿ, ಸಬ್ ಇನ್ಸ್ ಪೆಕ್ಟರ್ ಜನಾಬಾಯಿ ಕಡಪಟ್ಟಿ, ಕಂದಾಯ ಇಲಾಖೆ ಸಿಬ್ಬಂದಿಗಳು ಭಾಗವಹಿಸಿದ್ದರು. ಅರಣ್ಯ ಇಲಾಖೆ ಸಿಬ್ಬಂದಿಗಳು ಕಾಡಾನೆ ಹಾವಳಿ ಎದುರಾಗದಂತೆ ಮುಂಜಾಗ್ರತೆ ವಹಿಸಿದ್ದರು. ಪ್ರಧಾನ ಅರ್ಚಕರಾದ ರಾಮಸ್ವಾಮಿಯವರ ನೇತೃತ್ವದಲ್ಲಿ ಪೂಜೆ ಪುನಸ್ಕಾರಗಳು ನಡೆದವು.

ಪ್ರತ್ಯೇಕ ಅಪಘಾತದಲ್ಲಿ ಮೂವರ ಸಾವು

ಹಾಸನ: ಚನ್ನರಾಯಪಟ್ಟಣ ಸಂಚಾರ ಠಾಣೆ, ಬೇಲೂರು ಹಾಗೂ ಅರಕಲಗೂಡು ಠಾಣೆ ವ್ಯಾಪ್ತಿಯಲ್ಲಿ ಸಂಭವಿಸಿದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಮೂವರು ಮೃತಪಟ್ಟಿದ್ದಾರೆ. ನಿರ್ಲಕ್ಷ್ಯದ ಚಾಲನೆಯಿಂದ ಬೈಕ್ ಸವಾರ ಮೃತಪಟ್ಟಿರುವ ಘಟನೆ ಚನ್ನರಾಯಪಟ್ಟಣ ತಾಲ್ಲೂಕಿನ ಶೆಟ್ಟಿಹಳ್ಳಿ ಡೇರಿ ಸಮೀಪ ನಡೆದಿದೆ. ಪಟ್ಟಣದ ಕುಮಾರಸ್ವಾಮಿ ಮೃತರು. ಮೇ 8 ರಂದು ಚನ್ನರಾಯಪಟ್ಟಣದಿಂದ ಹಿರೀಸಾವೆಗೆ ಬೈಕ್‌ನಲ್ಲಿ ತೆರಳುತ್ತಿದ್ದಾಗ ಹಂಪ್ಸ್‌ನಲ್ಲಿ ನಿಯಂತ್ರಣ ತಪ್ಪಿ ಕೆಳಗೆ ಬಿದ್ದಿದ್ದರು. ತಕ್ಷಣವೇ ಅಂಬುಲೆನ್ಸ್ ಮೂಲಕ ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಹಿಮ್ಸ್‌ಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಚನ್ನರಾಯಪಟ್ಟಣ ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮತ್ತೊಂದು ಪ್ರಕರಣದಲ್ಲಿ ಕಾರು ಡಿಕ್ಕಿಯಾಗಿ ಬೈಕ್ ಸವಾರ ಮೃತಪಟ್ಟಿರುವ ಘಟನೆ ಬೇಲೂರು ತಾಲ್ಲೂಕಿನ ಸೂರಾಪುರ ಗಡಿ ಸಮೀಪ ನಡೆದಿದೆ. ಹಳೇಬೀಡು ಹೋಬಳಿ ಪೊನ್ನಾಥಪುರ ಭೋವಿ ಕಾಲೋನಿಯ ಮಂಜುನಾಥ್ ಮೃತರು. ಶನಿವಾರ ಬೆಳಿಗ್ಗೆ 6 ಗಂಟೆಗೆ ಬೇಲೂರಿನಿಂದ ಬೈಕ್‌ನಲ್ಲಿ ಬರುತ್ತಿದ್ದಾಗ ಎದುರುಗಡೆಯಿಂದ ವೇಗವಾಗಿ ಬಂದ ಕಾರು ಡಿಕ್ಕಿಯಾಗಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಬೇಲೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬತ್ತಿದ ಬೋರವೆಲ್: ಬೆಂಕಿ ನಂದಿಸಲು ನೀರಿಲ್ಲ

ಬೇಲೂರು ಅಗ್ನಿಶಾಮಕ ದಳ ಸಿಬ್ಬಂದಿ ಹೈರಾಣ | ಜೀವ ಜಲಕ್ಕೆ ಹಾಹಾಕಾರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಆಕಸ್ಮಿಕ ಅಗ್ನಿ ಅವಘಡ ಸಂದರ್ಭದಲ್ಲಿ ಪರಿಸ್ಥಿತಿ ನಿಭಾಯಿಸಲು ಅಗ್ನಿ ಶಾಮಕದಳದ ಪಾತ್ರ ಮುಖ್ಯವಾಗಿದೆಯಾದರೂ ಪಟ್ಟಣದ ಅಗ್ನಿ ಶಾಮಕ ವಾಹನಗಳಿಗೆ ಬೆಂಕಿ ನಂದಿಸಲು ನೀರು ಇಲ್ಲವಾಗಿದೆ.

ಬೇಸಿಗೆ ಸಮಯವಾದ್ದರಿಂದ ಅಗ್ನಿ ಅವಘಡಗಳು ಹೆಚ್ಚಿರುತ್ತವೆ. ವಿದ್ಯುತ್ ಶಾರ್ಟ್ ಸರ್ಕ್ಯೂಟ್, ವಾಹನ ಅಪಘಾತ ಮತ್ತಿತರ ತುರ್ತು ಸಂದರ್ಭದಲ್ಲಿ ಹೆಚ್ಚಿನ ಅನಾಹುತ